1332 (1529) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸುಮಾರು 4 ರಿಂದ 5 ಲಕ್ಷ ಮಾಜಿ ಸೈನಿಕರಿದ್ದು ಸರ್ಕಾರದಿಂದ ಸಿಗುವ ಸೌಲಭ್ಯ ಪಡೆಯಲು ಗಣಕೀಕರಣ ಸೌಲಭ್ಯ ಹೊಂದಿದೆಯೇ?

ಆ) ಸರ್ಕಾರದ ಸುತ್ತೋಲೆ ಸಂ:ಒಇ 117 ಕಸೈಸೇ 2003 ಬೆಂಗಳೂರು ದಿನಾಂಕ: 04–02–2004ರಲಲಿ ಜಂಟಿ ನಿರ್ದೇಶಕರ ಕಛೇರಿಯನ್ನು ಬೆಂಗಳೂರಿಗೆ ಸ್ಥಳಾಂತರಿಸಿರುವುದು ನಿಜವಲ್ಲವೆ?

ಇ) ಸರ್ಕಾರ ಇದರ ಬಗ್ಗೆ ಯಾವ ಕ್ರಮ ಕೈಗೊಂಡಿದೆ?

ಈ) ಸರ್ಕಾರಕ್ಕೆ ತಪ್ಪು ಮಾಹಿತಿ ಸಲ್ಲಿಸಿರುವ ಅಧಿಕಾರಿಗಳ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಂ.ಪಿ.ಪ್ರಕಾಶ್ (ಗೃಹ ಸಚಿವರು) :

ಅ) ಹೌದು.

ಆ) ಜಂಟಿ ನಿರ್ದೇಶಕರ ಹುದ್ದೆಯನ್ನು ಮಾತ್ರ ಸ್ಥಳಾಂತರಿಸಲಾಗಿದ್ದು ಜಂಟಿ ನಿರ್ದೇಶಕರ ಕಛೇರಿಯನ್ನು ಸ್ಥಳಾಂತರಿಸಲಾಗಿಲ್ಲ.

ಇ) ಉಪ ನಿರ್ದೇಶಕರ ಹುದ್ದೆಯನ್ನು ಜಂಟಿ ನಿರ್ದೇಶಕರ ಹುದ್ದೆಗೆ ಮೇಲ್ದರ್ಜೆಗೇರಿಸಿ, ಹುದ್ದೆಯನ್ನು ತುಂಬಲಾಗಿದೆ.

ಈ) ತಪ್ಪು ಮಾಹಿತಿಯನ್ನು ಸಲ್ಲಿಸಿಲ್ಲವಾದ್ದರಿಂದ ಅಧಿಕಾರಿಯ ಮೇಲೆ ಕ್ರಮ ಕೈಗೊಂಡಿಲ್ಲ.

1333 (1530) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಸುಮಾರು 1150 ಮಾಜಿ ಸೈನಿಕರಿದ್ದು ಅವರ ಅವಲಂಬಿತ ಜನ 5000 ವಿದ್ದು ಅವರ ಕಲ್ಯಾಣ ಕಾರ್ಯಗಳು ಕುಂಠಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಇದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಇ) ಇವರಿಗೋಸ್ಕರ ಒಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಾರ್ಯಾಲಯ ಪ್ರಸ್ತುತ ವರ್ಷದಲ್ಲಿಯೇ ಪ್ರಾರಂಭಿಸಲಾಗುವುದೇ?

ಶ್ರೀ ಎಂ.ಪಿ.ಪ್ರಕಾಶ್ (ಗೃಹ ಸಚಿವರು) :

ಅ) ಬೀದರ್ ಜಿಲ್ಲೆಯಲ್ಲಿ ಸುಮಾರು 1300 ಮಾಜಿ ಸೈನಿಕರಿದ್ದು ಹಾಗೂ ಅವರ ಅವಲಂಬಿತರು ಸುಮಾರು 3900 ಇದ್ದು ಇಲಾಖೆಯ ಗುಲ್ಬರ್ಗಾ ಕಛೇರಿಯ ಕಾರ್ಯವ್ಯಾಪ್ತಿಯಲ್ಲಿ ಬೀದರ ಜಿಲ್ಲೆಯು ಒಳಗೊಂಡಿರುತ್ತದೆ ಅಲ್ಲಿಯ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರ ಯಾವುದೇ ಕಲ್ಯಾಣ ಕಾರ್ಯಕ್ರಮಗಳು ಕುಂಠಿತಗೊಂಡಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಇಲ್ಲ.

1334 (530) ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನಲ್ಲಿ ಎಲ್ಲೆಲ್ಲಿ ಆಟೋರಿಕ್ಷಾ ಲೇನ್‌ಗಳನ್ನು ಹಾಕಲಾಗಿದೆ?

ಆ) ಬೆಂಗಳೂರು ನಗರದಲ್ಲಿ ಪ್ರತಿದಿನ ಓಡಾಡುವ ಆಟೋರಿಕ್ಷಾಗಳ ಅಂದಾಜು ಸಂಖ್ಯೆ ಎಷ್ಟು?

ಇ) ಈ ಆಟೋರಿಕ್ಷಾ ಲೇನ್ ಹಾಕಲು ಕಾರಣಗಳೇನು?

ಈ) ಆಟೋರಿಕ್ಷಾಗಳು ಈ ಲೇನ್‌ನಲ್ಲಿಯೇ ಸಂಚರಿಸುತ್ತಿವೆಯೇ?

ಉ) ದ್ವಿಚಕ್ರ ವಾಹನಗಳಿಗೂ ಪ್ರಮುಖ ರಸ್ತೆಗಳಲ್ಲಿ ಪ್ರತ್ಯೇಕ ಲೇನ್ ಹಾಕಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :

ಅ) ಬೆಂಗಳೂರು ನಗರದಲ್ಲಿ ಈ ಕೆಳಕಂಡ ರಸ್ತೆಗಳಲ್ಲಿ ಆಟೋಲೇನ್ ಪದ್ಧತಿಯನ್ನು ಜಾರಿಗೆ ತರಲಾಗಿದೆ.

1. ಹಳೇ ಅಂಚೆ ಕಛೇರಿ ರಸ್ತೆ: ಮೈಸೂರು ಬ್ಯಾಂಕ್ ವೃತ್ತದಿಂದ ಕೆ.ಆರ್.ವೃತ್ತದವರೆಗೆ.
2. ಕ್ವೀನ್ಸ್ ರಸ್ತೆ : ಕ್ವೀನ್ಸ್ ವೃತ್ತದಿಂದ ಸಿ.ಟಿ.ಓ ಜಂಕ್ಷನ್‌ವರೆಗೆ.
3. ಕ್ವೀನ್ಸ್ ರಸ್ತೆ : ಸಿ.ಟಿ.ಓ ವೃತ್ತದಿಂದ ಕ್ವೀನ್ಸ್ ವೃತ್ತದವರೆಗೆ.